# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ವೆಂಕಟೇಶ್ವರ ಏತ ನೀರಾವರಿ ಯೋಜನೆಯ ರೂ.174.42 ಕೋಟಿಗಳ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

*******

*ಓದಲಾಗಿದೆ:* ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: ಕನೀನಿ/ವೆಂಕಟೇಶ್ವರ ಏ.ನೀ.ಯೋ/ಡಿ.ಪಿ.ಆರ್/2014-15/3413, ದಿನಾಂಕ: 21/10/2014.

*ಪ್ರಸ್ತಾವನೆ:*

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರ ಮೇಲೆ ಓದಲಾದ ಪತ್ರದಲ್ಲಿ, ಬಾಗಲಕೋಟೆ ಜಿಲ್ಲೆಯ ಜಮಖಂಡಿ ಮತ್ತು ಮುಧೋಳ ತಾಲ್ಲೂಕಿನ ಬರ ಪೀಡಿತ ಪ್ರದೇಶಗಳ ಅಭಿವೃದ್ಧಿಗಾಗಿ ನೀರನ್ನು ಒದಗಿಸಲು ವೆಂಕಟೇಶ್ವರ ಏತ ನೀರಾವರಿ ಯೋಜನೆಯನ್ನು ಪ್ರಸ್ತಾಪಿಸಿರುತ್ತಾರೆ. ಅವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ವಿವರವಾದ ಯೋಜನಾ ವರದಿ ಅನುಸಾರ, ಮುಖ್ಯವಾಗಿ ಜಮಖಂಡಿ ತಾಲ್ಲೂಕಿನ ಕಲ್ಲಹಳ್ಳಿ, ಸಿದ್ದಾಪುರ ಗ್ರಾಮಗಳು ಮತ್ತು ಜಗದಾಳ ಗ್ರಾಮದ ಭಾಗ, ಬಂದಿಗಣಿ, ನವಲಗಿ, ಚಿಮ್ಮಡ ಗ್ರಾಮಗಳು ಮತ್ತು ಮುಧೋಳ ತಾಲ್ಲೂಕಿನ ಮುಗಳಕೋಡ, ಬೆಳಗಲಿ, ಕುಲ್ಹಳ್ಳಿ ಮತ್ತು ಶಿರೋಳ ಗ್ರಾಮಗಳು (ಭಾಗಶ:) ಈ ಯೋಜನೆಯಡಿಯಲ್ಲಿ ಸೇರುತ್ತವೆ. ಈ ಯೋಜನೆ ಅಡಿಯಲ್ಲಿ ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಕುಲ್ಲಹಳ್ಳಿ ಗ್ರಾಮದ ಬಳಿ ನೀರನ್ನು ಎತ್ತಲು ಪ್ರಸ್ತಾಪಿಸಲಾಗಿದ್ದು, ಇದು ಹಿಪ್ಪರಗಿ ಬ್ಯಾರೇಜಿನ ಸ್ವಲ್ಪ ಮೇಲ್ಭಾಗದಲ್ಲಿರುತ್ತದೆ. ಕೃಷ್ಣಾ ನದಿಯಲ್ಲಿ ಮುಂಗಾರಿನಲ್ಲಿ ಸಾಕಷ್ಟು ಒಳಹರಿವು ಇರುವುದರಿಂದ, 0.750 ಟಿಎಂಸಿ ನೀರನ್ನು ಬಳಸಿಕೊಂಡು, 7200 ಹೆಕ್ಟೇರ್ (17792 ಎಕರೆಗಳು) ಪ್ರದೇಶಕ್ಕೆ ನೀರಾವರಿ ಒದಗಿಸಿ, ಖರೀಫ್ ಬೆಳೆಗಳಿಗೆ ಮಾತ್ರ ನೀರನ್ನು ಎತ್ತಲು ಪ್ರಸ್ತಾಪಿಸಲಾಗಿದೆ. ಜೂನ್ 15ರಿಂದ ಅಕ್ಟೋಬರ್ 15ರವರೆಗೆ (ಖರೀಫ್ ಋತು) ಸಾಕಷ್ಟು ನೀರಿನ ಹರಿವು ಇರುವುದರಿಂದ, ಹಿಪ್ಪರಗಿ ಬ್ಯಾರೇಜ್‌ನಲ್ಲಿ ಸಂಗ್ರಹವಾಗಿರುವ ನೀರನ್ನು ಎತ್ತುವ ಅವಶ್ಯಕತೆ ಇರುವುದಿಲ್ಲವೆಂದು, ಇದರಿಂದ ಹಿಪ್ಪರಗಿ ಯೋಜನೆಯ ನೀರಿನ ಹಂಚಿಕೆ ಮೇಲೆ ಯಾವುದೇ ಪರಿಣಾಮ ಆಗುವುದಿಲ್ಲವೆಂದು ತಿಳಿಸಲಾಗಿದೆ. 2013-14ನೇ ಸಾಲಿನ ಜ.ಸಂ.ಅ.ಸಂ. ದರಪಟ್ಟಿಯ ಆಧಾರದ ಮೇಲೆ ಸದರಿ ಯೋಜನೆಯ ಅಂದಾಜು ಮೊತ್ತವು ರೂ.174.42 ಕೋಟಿಗಳಾಗಿರುತ್ತದೆ ಎಂದು ತಿಳಿಸಲಾಗಿದೆ.

ಮುಂದುವರೆದು, ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿ: 11/07/2014ರಂದು ನಡೆದ ಕರ್ನಾಟಕ ನೀರಾವರಿ ನಿಗಮ ನಿಯಮಿತದ 5ನೇ ಅಂದಾಜು ಪರಿಶೀಲನಾ ಸಮಿತಿಯ ಸಭೆಯಲ್ಲಿ ಮಂಡಿಸಿ, ಸಮಿತಿಯು ಮಾಡಿದ ಶಿಫಾರಸ್ಸಿನ ಅನ್ವಯ, ದಿನಾಂಕ 20.09.2014ರಂದು ನಡೆದ 66ನೇ ಕ.ನೀ.ನಿ.ದ ನಿರ್ದೇಶಕರ ಮಂಡಳಿಯ ಸಭೆಯ ಮುಂದೆ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತೆಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ವರದಿ ಮಾಡಿರುತ್ತಾರೆ. ಮಂಡಳಿಯ ಶಿಫಾರಸ್ಸಿನಂತೆ ರೂ.174.42 ಕೋಟಿಗಳ ಅಂದಾಜು ಮೊತ್ತದ ವೆಂಕಟೇಶ್ವರ ಏತ ನೀರಾವರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು ಸರ್ಕಾರದ ಆಡಳಿತಾತ್ಮಕ ಅನುಮೋದನೆಗಾಗಿ ಅವರು ಸಲ್ಲಿಸಿರುತ್ತಾರೆ.

2...

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 17 ಓಆಯೋ 2013, ಬೆಂಗಳೂರು, ದಿನಾಂಕ: 12-02-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 0.75 ಟಿ.ಎಂ.ಸಿ. ನೀರನ್ನು ಉಪಯೋಗಿಸಿಕೊಂಡು ಬಾಗಲಕೋಟೆ ಜಿಲ್ಲೆಯ ಜಮಖಂಡಿ ಮತ್ತು ಮುಧೋಳ ತಾಲ್ಲೂಕುಗಳಲ್ಲಿ ಬರುವ 7200 ಹೆ. ಪ್ರದೇಶಕ್ಕೆ ನೀರಾವರಿಯನ್ನು ಒದಗಿಸಲು ರೂ.174.42 ಕೋಟಿಗಳ ಮೊತ್ತದ ವೆಂಕಟೇಶ್ವರ ಏತ ನೀರಾವರಿ ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 640 ಆಕೋ-1/2014, ದಿನಾಂಕ: 17/12/2014ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

12/2/15

(ಕೆ.ಎಸ್. ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-4),
ಜಲ ಸಂಪನ್ಮೂಲ ಇಲಾಖೆ.

ಗೆ:

1) ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪಟ ಶಾಖೆ), ವಿಧಾನ ಸೌಧ, ಬೆಂಗಳೂರು (ಸಚಿವ ಸಂಪುಟ ಪ್ರಕರಣ ಸಂಖ್ಯೆ: ಸಿ-33/2015, ದಿನಾಂಕ 21.01.2015ರ ಮೇರೆಗೆ)
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ
7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು
8) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು
9) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾಫಿ ಬೋರ್ಡ್ ಕಟ್ಟಡ, ಬೆಂಗಳೂರು
10) ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದರಾವ್ ವೃತ್ತ, ಬೆಂಗಳೂರು
11) ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ನೀರಾವರಿ (ಉತ್ತರ), ಬೆಳಗಾವಿ.
12) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13) ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ (ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
14) ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
15) ಸರ್ಕಾರದ ಉಪ ಕಾರ್ಯದರ್ಶಿಗಳು (ಕೆಬಿಜೆಎನ್), ಜಲಸಂಪನ್ಮೂಲ ಇಲಾಖೆ, ಬೆಂಗಳೂರು
16) ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಜಿಯೋ ಮೆಟ್ರಿಕ್ ಕೇಂದ್ರ, ಆನಂದರಾವ್ ವೃತ್ತ, ಬೆಂಗಳೂರು.
17) ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು, 10 ಪ್ರತಿಗಳು
18) ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.

*******